**ಜೆಎಸ್‌ಎಸ್ ಮಹಾವಿದ್ಯಾಪೀಠ**

**ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು**

# ಶಿವಾನುಭವ ದಾಸೋಹ – 322

**22 ಫೆಬ್ರವರಿ 2025 * ಶನಿವಾರ * ಸಂಜೆ 6.00**

**ಶಿವಭವನ, ಶಿವದೇವಾಲಯ, ಎಸ್‌ಬಿಎಂ ಕಾಲೋನಿ**

**ಶ್ರೀರಾಂಪುರ 2ನೇ ಹಂತ, ಅರವಿಂದನಗರ, ಮೈಸೂರು**

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

**ಅಧ್ಯಕ್ಷತೆ**

**ಶ್ರೀ ಹೆಚ್.ಜಿ. ಪರಶಿವಪ್ಪ**

ಅಧ್ಯಕ್ಷರು, ಶಿವದೇವಾಲಯ ಹಾಗೂ ನಿವೃತ್ತ ಬ್ಯಾಂಕ್ ಅಧಿಕಾರಿಗಳು

**ಉಪನ್ಯಾಸ**

**ಡಾ. ಜ್ಯೋತಿ ಶಂಕರ್**

ವಾಗ್ಮಿಗಳು ಮತ್ತು ಸಂಸ್ಕೃತಿ ಚಿಂತಕರು, ಮೈಸೂರು

**ವಿಷಯ : ದ್ವಾದಶ ಜ್ಯೋತಿರ್ಲಿಂಗಗಳು**

**ವಚನ ಗಾಯನ**

**ಪರಂಜ್ಯೋತಿ ಮಹಿಳಾ ಬಳಗ**

ಮೈಸೂರು

---

**ಪ್ರಾಯೋಜಕರು**

**ವೀರಶೈವ ಸ್ನೇಹ ಬಳಗ (ರಿ)**

**ಎಸ್‌ಬಿಎಂ ಕಾಲೋನಿ, ಶ್ರೀರಾಂಪುರ 2ನೇ ಹಂತ, ಅರವಿಂದನಗರ, ಮೈಸೂರು**

**ತಮಗೆ ಆದರದ ಸ್ವಾಗತ**

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದ ನಿಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ಪ್ರಾರಂಭಿಸಿದ್ದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಶ್ರೀ ಹೆಚ್.ಜಿ. ಪರಶಿವಪ್ಪನವರು** ಗುಂಡ್ಲುಪೇಟೆ ತಾಲ್ಲೂಕು ಹುಣಸಿನಪುರದವರು. ಮೈಸೂರು ವಿಶ್ವವಿದ್ಯಾನಿಲಯದ ಬಿ.ಕಾಂ. ಪದವೀಧರರು. ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನಲ್ಲಿ ವೃತ್ತಿ ಆರಂಭಿಸಿ, ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದರು. ನಿವೃತ್ತಿ ಹೊಂದಿದ ನಂತರ ಕೃಷಿಕಾಯಕದಲ್ಲಿ ತೊಡಗಿಸಿಕೊಂಡಿದ್ದಾರೆ. ವೀರಶೈವ ಸ್ನೇಹ ಬಳಗದ ಅಧ್ಯಕ್ಷರಾಗಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ. ಸ್ನೇಹ ಬಳಗದ ವತಿಯಿಂದ ಅನೇಕ ಜನೋಪಯೋಗಿ ಕಾರ್ಯಗಳನ್ನು ಮಾಡುತ್ತಿದ್ದಾರೆ.

**ಡಾ. ಜ್ಯೋತಿ ಶಂಕರ್‌ರವರು** ಮೈಸೂರಿನವರು. ಬಹುಮುಖ ಪ್ರತಿಭಾನ್ವಿತರು. ಸಾಹಿತ್ಯ, ಸಂಗೀತ, ಗಮಕ, ಉಪನ್ಯಾಸ ಕ್ಷೇತ್ರಗಳಲ್ಲಿ ಪರಿಣತರು. ಪಿಎಚ್.ಡಿ ಮತ್ತು ಡಿ.ಲಿಟ್ ಪದವಿಗಳನ್ನು ಪಡೆದಿರುವರು. ಪ್ರಾಚೀನ ಕನ್ನಡ ಕಾವ್ಯಗಳಲ್ಲಿ ಅಲಂಕಾರ, ಷಟ್ಪದಿ, ಹರಿದಾಸ ಸಾಹಿತ್ಯ, ಕುವೆಂಪು, ಮಹಿಳಾ ಸಾಹಿತ್ಯ ಕುರಿತು 25ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದಾರೆ. ಪ್ರಸ್ತುತ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕನ್ನಡ ವಿಭಾಗದ ಪ್ರಾಧ್ಯಾಪಕರಾಗಿ ಮತ್ತು ಸ್ವಾಮಿ ವಿವೇಕಾನಂದ ಅಧ್ಯಯನ ಕೇಂದ್ರದ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅಮೆರಿಕನ್ ಇನ್ಸ್ಟಿಟ್ಯೂಟ್ ಆಫ್ ಇಂಡಿಯನ್ ಸ್ಟಡೀಸ್ ಸಂಸ್ಥೆಯಲ್ಲಿ ಸಂದರ್ಶಕ ಪ್ರಾಧ್ಯಾಪಕರಾಗಿ ಹೊರದೇಶದ ವಿದ್ಯಾರ್ಥಿಗಳಿಗೂ ಕನ್ನಡವನ್ನು ಬೋಧಿಸುತ್ತಿದ್ದಾರೆ. ಇವರ ಬಹುಮುಖಿ ಸೇವೆಗೆ ಗಮಕ ಕಲಾವಸಂತ, ರೋಟರಿ ಪ್ರಶಸ್ತಿ, ಹೊಯ್ಸಳ ಪ್ರಶಸ್ತಿ ಸೇರಿದಂತೆ ಹಲವಾರು ಪುರಸ್ಕಾರಗಳು ಲಭಿಸಿವೆ.

**ವೀರಶೈವ ಸ್ನೇಹ ಬಳಗವು** 1993ರಲ್ಲಿ ಮೈಸೂರಿನ ಕುವೆಂಪುನಗರದಲ್ಲಿ ಸ್ಥಾಪನೆಯಾಗಿ ಅನೇಕ ಧಾರ್ಮಿಕ, ಸಾಮಾಜಿಕ ಜನೋಪಯೋಗಿ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದೆ. ಬಳಗದ ವತಿಯಿಂದ ಹಬ್ಬದ ದಿನಗಳಲ್ಲಿ ವಿಶೇಷ ಪೂಜೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಸಾರ್ವಜನಿಕರ ಉಪಯೋಗಕ್ಕಾಗಿ ಸಮುದಾಯ ಭವನವನ್ನು ನಿರ್ಮಿಸಿ ರಿಯಾಯಿತಿ ದರದಲ್ಲಿ ಒದಗಿಸಲಾಗುತ್ತಿದೆ. ಕಾರ್ಯಕಾರಿ ಸಮಿತಿಯವರು ಸಮಾಜದ ಹಿತಕ್ಕಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.